## ಕರ್ನಾಟಕ ಸರ್ಕಾರ

ಸಂಖ್ಯೆ:ಸಕನಿ/ಸಿಬ್ಬಂದಿ-3/ಸಿಆರ್-46/2020-21

ಸಮಾಜ ಕಲ್ಯಾಣ ಆಯುಕ್ತರ ಕಛೇರಿ,
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 22/3/2021

## ಅಧಿಕೃತ ಜ್ಞಾಪನ

ವಿಷಯ: ದಿನಾಂಕ:01-01-2021 ರಲ್ಲಿದ್ದಂತೆ ಸಮಾಜ ಕಲ್ಯಾಣ ಇಲಾಖೆಯ ಗ್ರೂಪ್-ಸಿ ವೃಂದದ ವಾಹನ ಚಾಲಕರ ವೃಂದದ ಕಲ್ಯಾಣ - ಕರ್ನಾಟಕ ಸ್ಥಳೀಯ ವೃಂದ ಹಾಗೂ ಉಳಿಕೆ ಮೂಲ ವೃಂದದ ನೌಕರರ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಕುರಿತು.

ಉಲ್ಲೇಖ:
1. ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957.
2. ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 07 ಸೇನೆನಿ 96 ದಿನಾಂಕ: 16-07-1996.
3. ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 32 ಸೇನೆಇ 03 ದಿನಾಂಕ: 10-06-2003.
4. ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 06 ಪಿಎಲ್‌ಎಕ್ಸ್ ದಿನಾಂಕ: 06-11-2013.
5. ಸರ್ಕಾರದ ಅಧಿಸೂಚನೆ - 1 ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013 ದಿನಾಂಕ: 29-01-2014.
6. ಈ ಕಛೇರಿ ಸಮ ಸಂಖ್ಯೆ ಅಧಿಕೃತ ಜ್ಞಾಪನಾ ದಿನಾಂಕ: 18.01.2021.

*******

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ (6) ರಲ್ಲಿನ ಅಧಿಕೃತ ಜ್ಞಾಪನದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಗ್ರೂಪ್-ಸಿ ವೃಂದದ ವಾಹನ ಚಾಲಕರ ಹುದ್ದೆಯ ನೌಕರರ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ: 01-01-2021 ರಲ್ಲಿದ್ದಂತೆ ಇಲಾಖೆಯ ವೆಬ್‌ಸೈಟ್ www.sw.kar.nic.in ನಲ್ಲಿ ಪ್ರಕಟಿಸಿ, ಆಕ್ಷೇಪಣೆ ಸಲ್ಲಿಸಲು ದಿನಾಂಕ:10-02-2021 ರೊಳಗಾಗಿ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸುವಂತೆ ಕಾಲಾವಕಾಶವನ್ನು ನೀಡಲಾಗಿರುತ್ತದೆ.

ನಿಗದಿತ ಕಾಲಮಿತಿಯಲ್ಲಿ ಸ್ವೀಕೃತಗೊಂಡಿರುವ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಆಕ್ಷೇಪಣೆ ಕುರಿತಂತೆ ಸೂಕ್ತ ಹಿಂಬರಹವನ್ನು ಅನುಬಂಧ-ಅ ರಲ್ಲಿ ಲಗತ್ತಿಸಿದೆ. ಉಳಿಕೆ ಮೂಲ ವೃಂದದ ಮತ್ತು ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದ ಅಂತಿಮ ಜೇಷ್ಠತಾ ಪಟ್ಟಿಯನ್ನು ಹೊರಡಿಸಲಾಗಿದೆ. ಸದರಿ ಅಂತಿಮ ಜೇಷ್ಠತಾ ಪಟ್ಟಿಯನ್ನು ಇಲಾಖೆಯ ವೆಬ್‌ಸೈಟ್ www.sw.kar.nic.in ನಲ್ಲಿ ಪ್ರಕಟಿಸಲಾಗಿದೆ.

22/3

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ.